ಕರ್ನಾಟಕ ಸರ್ಕಾರ

# ಸಾರ್ವಜನಿಕ ಶಿಕ್ಷಣ ಉಪನಿರ್ದೇಶಕರವರ ಕಾರ್ಯಾಲಯ, ಕೋಲಾರ ಜಿಲ್ಲೆ, ಕೋಲಾರ.

ಸಂಖ್ಯೆ ಅನು2/3541/ನೋಂದಣಿ/67/2008-09 ದಿನಾಂಕ: 13.04.2009.

## ನಮೂನೆ-2

(ನಿಯಮ 3 ಉಪನಿಯಮ 5(ಜಿ) )

ಪ್ರಮಾಣ ಪತ್ರ ಸಂಖ್ಯೆ: 07/2009-10

ಬಾಂಟಿಯಾ ಎಜುಕೇಷನಲ್, ಸೋಷಿಯಲ್, ಕಲ್ಚರಲ್ ಅಂಡ್. ವೆಲ್ಪೇರ್ ಟ್ರಸ್ಟ್(ರಿ), ತುಲಸಿ ನಿವಾಸ್, ಅರಿಹಂತ್ ಮಾರ್ಗ್, ಜೈನ್ ಕಾಲೋನಿ, ರಾಬರ್ಟ್‌ಸನ್‌ಪೇಟೆ, ಕೆ.ಜಿ.ಎಫ್., ಕೋಲಾರ ಜಿಲ್ಲೆ. ಇದರ ಗವರ್ನಿಂಗ್ ಕೌನ್ಸಿಲ್ ಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್ 1995) ಸೆಕ್ಷನ್ 31 ರಂತೆ ಹಾಗೂ ಸರ್ಕಾರದ ಆದೇಶ ಸಂಖ್ಯೆ ಇಡಿ.122.ಎಸ್.ಇ.ಎಸ್..2007 ದಿನಾಂಕ: 17.05.2007ರ ಪ್ರಕಾರ ಈ ದಿನ 13.04.2009 ರಂದು ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ 07, ಪುಟ ಸಂಖ್ಯೆ 13, ವಾಲ್ಯೂಂ ಸಂಖ್ಯೆ 01 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೋಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 01 | ಕ್ರಮ ಸಂಖ್ಯೆ | 07/2009-10 |
| 02 | ಶಾಲೆಯ ಹೆಸರು ಮತ್ತು ವಿಳಾಸ | ಜೈನ್ ಪ್ರಾಥಮಿಕ ಶಾಲೆ, ಭಾರತ್‌ನಗರ, ಡಿ.ಕೆ.ಹಳ್ಳಿ ರಸ್ತೆ, ಬೆಮೆಲ್‌ನಗರ, ಕೆ.ಜಿ.ಎಫ್. ಕೋಲಾರ ಜಿಲ್ಲೆ. |
| 03 | ಅನುಮತಿ ನೀಡಿದ ತರಗತಿ | 1 ರಿಂದ 5ನೇ ತರಗತಿ (ಶಾಶ್ವತ ಅನುದಾನರಹಿತವಾಗಿ) |
| 04 | ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | 2009-10 (Permanently without-aid) |
| 05 | ಅನುಮತಿ ನೀಡಿದ ಮಾಧ್ಯಮ | ಕನ್ನಡ ಮಾಧ್ಯಮ |
| 06 | ಶುಲ್ಕ ಪಾವತಿ ಮಾಡಿದ ವಿವರ | ರೂ. 5000-00 |

**ಈ ನೋಂದಣಿ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲಾಗಿದೆ. ಇದರಲ್ಲಿ ಯಾವುದೇ ಷರತ್ತನ್ನು ಉಲ್ಲಂಘಿಸಿದಲ್ಲಿ ಮೇಲ್ಕಂಡ ನೋಂದಣಿ(ಅನುಮತಿ)ಯನ್ನು ರದ್ದುಪಡಿಸುವ ಅಧಿಕಾರವನ್ನು ಇಲಾಖೆಯು ಕಾಯ್ದಿರಿಸಿಕೊಂಡಿದೆ.**

01. ಈ ನೋಂದಾವಣೆಯು ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಖಾಸಗಿ ಶಿಕ್ಷಣ ಸಂಸ್ಥೆಗಳ ನಿಯಂತ್ರಣ, ವರ್ಗೀಕರಣ) ನಿಯಮ-1997 ನಿಯಮ 3(5)(ಡಿ) ನಲ್ಲಿ ಸೂಚಿಸಿರುವ ಅಂಶಗಳಿಗೆ ಒಳಪಟ್ಟಿರುತ್ತದೆ.
02. ಕರ್ನಾಟಕ ಶಿಕ್ಷಣ ಸಂಸ್ಥೆಗಳು (ವರ್ಗೀಕರಣ, ನಿಯಂತ್ರಣ ಮತ್ತು ಪಠ್ಯವಸ್ತು ನಿಗದೀಕರಣ ಇತ್ಯಾದಿ) ನಿಯಮಾವಳಿಗಳು 1995ರ ನಿಯಮ 4,5,6 ಮತ್ತು 8 ರನ್ವಯ ಸುರಕ್ಷತಾ ಕ್ರಮವಾಗಿ, ಶಾಲಾ ಕಟ್ಟಡವು ಕಡ್ಡಾಯವಾಗಿ ಉತ್ತು ಗುಣಮಟ್ಟದ ಮೇಲ್ಚಾವಣಿಯನ್ನು ಹೊಂದಿದ್ದು, ಉತ್ತಮ ಗಾಳಿ ಬೆಳಕಿಗೆ ಅವಕಾಶವಿರಬೇಕು. ಗಂಡು ಮತ್ತು ಹೆಣ್ಣು ಮಕ್ಕಳಿಗೆ ಪ್ರತ್ಯೇಕ ಶೌಚಾಲಯಗಳನ್ನು ಒದಗಿಸಬೇಕು. ಕುಡಿಯುವ ನೀರನ್ನು ಒದಗಿಸಿರಬೇಕು. ಶಾಲಾ ಆವರಣದಲ್ಲಿ ಅಪಾಯಕಾರಿ ಸ್ಥಳಗಳಿಗೆ ಬೇಲಿ ಹಾಕಿ, ಶಾಲಾ ಆವರಣಕ್ಕೆ ಮಕ್ಕಳ ಸುರಕ್ಷತೆಗಾಗಿ ಕಾಂಪೌಂಡನ್ನು ಕಡ್ಡಾಯವಾಗಿ ನಿರ್ಮಿಸತಕ್ಕದ್ದು, ಮತ್ತು ಬೆಂಕಿ ಆಕಸ್ಮಿಕಗಳನ್ನು ತಪ್ಪಿಸಲು ಅಗತ್ಯ ಸುರಕ್ಷತಾ ಕ್ರಮಗಳನ್ನು ತೆಗೆದುಕೊಳ್ಳಬೇಕು.
03. ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ತರಗತಿ/ವಿಭಾಗಗಳನ್ನು ತೆರೆಯುವಂತಿಲ್ಲ.
04. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್-41(5) ರಂತೆ ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
05. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಆಡಳಿತ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೇ ಹಸ್ತಾಂತರಿಸತಕ್ಕದ್ದಲ್ಲ.
06. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸಿದ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 (ಕರ್ನಾಟಕ ಆಕ್ಟ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
07. ಈ ಪ್ರಾಥಮಿಕ ಶಾಲಾ ನೋಂದಾವನೆಯು ಸರ್ಕಾರಿ ಅಧಿಸೂಚನೆ ಸಂಖ್ಯೆ ಇಡಿ.175.ಪಿಎಂಸಿ.95 ದಿನಾಂಕ: 07.09.98 ಮತ್ತು ದಿನಾಂಕ: 29.12.98ರ ಪ್ರಕಾರ ಶಾಶ್ವತ ಅನುದಾನರಹಿತವಾಗಿರುತ್ತದೆ. (Permanently without-aid).
08. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು/ಅವುಗಳಿಗೆ ಬದ್ಧವಾಗಿರತಕ್ಕದ್ದು.

